# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಸಾಗರವ ದಾಟಲು ದೋಣಿ ಬೇಕು
● ಆ ದೋಣಿಯ ಸಾಗಿಸಲು ನಾವಿಕ ಬೇಕು..
ಮೋಡವ ಸರಿಸಲು ಸೂರ್ಯ ಬೇಕು
● ಆ ಸೂರ್ಯನ ಕಿರಣಗಳು ಪಸರಿಸಲೇಬೇಕು
ಲೋಕ ಉಳಿಯಲು ಪ್ರಕೃತಿ ಬೇಕು
● ಆ ಪ್ರಕೃತಿಯ ಉಳಿಸಲು ಎಲ್ಲರು ಪ್ರಯತ್ನಿಸಬೇಕು..
ಉಪಕಾರ ಮಾಡಲು ಮನಸ್ಸು ಬೇಕು
● ಆ ಮನಸ್ಸನ್ನು ಕ್ರೋಢೀಕರಿಸಲು ಮಾನವನಾಗಬೇಕು..
ಮಾನವನಾಗಲು ಭಗವಂತನ ಕೃಪೆ ಬೇಕು
● ಆ ಭಗವಂತನ ಒಲಿಸಲು ನಾಮಸ್ಮರಣೆ ಮಾಡಬೇಕು..

**ಭಗವಾನ್ ಶ್ರೀಕೃಷ್ಣ**

PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 09-01-2026 to 15-01-2026 ಬೆಲೆ:10-00 ಸಂಪುಟ–1 ಸಂಚಿಕೆ–15 ಪುಟಗಳು–6




ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು



ಸಮುದ್ರ ಭಾಗದಲ್ಲಿ ವಾಸಿಸುವ ಜನರಿಗೆ ಚಿರಪರಿಚಿತವಾಗಿರುವ ಹಕ್ಕಿ ಎಂದರೆ ಬಿಳಿ ಹೊಟ್ಟೆಯ ಸಮುದ್ರ ಹದ್ದು. ಸಮುದ್ರ ತೀರಕ್ಕೆ ವಿಹಾರಕ್ಕೆ ಹೋದಾಗ ಒಮ್ಮೆ ತಲೆ ಎತ್ತಿ ಗಮನಿಸಿದರೆ ಎಲ್ಲರಿಗೂ ಕಾಣಸಿಗಬಹುದು. ಭಾರತದ ಸಮುದ್ರಭಾಗಗಳಲ್ಲಿ ಹೆಚ್ಚಾಗಿ ಇದ್ದರೂ ಆಸ್ಟ್ರೇಲಿಯಾದವರೆಗೆ ಇವುಗಳು ಕಾಣಸಿಗುತ್ತದೆ ಎನ್ನುತ್ತಾರೆ ತಜ್ಞರು. ಹೆಚ್ಚಾಗಿ ಮೀನುಗಳೇ ಇದರ ಪ್ರಮುಖ ಆಹಾರ. ಆಸ್ಟ್ರೇಲಿಯಾದ ಕೆಲವು ಭಾಗದಲ್ಲಿ ಇದು ಪೂಜನೀಯ ಪಕ್ಷಿಯೂ ಕೂಡ. ಇವುಗಳು ಗೂಡು ಕಟ್ಟಲು ಎತ್ತರದ ಮರಗಳನ್ನು ಆಶ್ರಯಿಸುತ್ತದೆ. ಇತ್ತೀಚಿನ ದಿನಗಳಲ್ಲಿ ಇಂತಹ ಕೆಲವು ಪಕ್ಷಿಗಳ ಸಂತತಿ ಅಳಿವಿನಂಚಿನಲ್ಲಿದೆ.

## ರಾಜ್ಯದಲ್ಲಿರುವುದು ರಬ್ಬರ್‌ಸ್ಟ್ಯಾಂಪ್ ಗೃಹ ಸಚಿವರೇ –ಎಚ್ಡಿಕೆ



**ಬೆಂಗಳೂರು:** ಬಳ್ಳಾರಿಯಲ್ಲಿ ಪೊಲೀಸ್ ಅಧಿಕಾರಿಗಳ ಸಭೆ ನಡೆಸುವುದಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾರು. ಅವರಿಗೆ ಆ ಅಧಿಕಾರ ಯಾರು ಕೊಟ್ಟರು. ರಾಜ್ಯದಲ್ಲಿರುವುದು ರಬ್ಬರ್ ಸ್ಟ್ಯಾಂಪ್ ಗೃಹ ಸಚಿವರಾ' ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಗಳವಾರ ಬಳ್ಳಾರಿಯಲ್ಲಿ ಡಿಸಿಎಂ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದ್ದಾರೆ. ಅದಕ್ಕೆ ಗೃಹ ಸಚಿವರು ಇಲ್ಲವೇ? ರಾಜ್ಯದಲ್ಲಿ ಇರುವ ಗೃಹ ಸಚಿವರು **3ನೇ ಪುಟಕ್ಕೆ**

## ಬಿಜೆಪಿ, ಜೆಡಿಎಸ್ ವಿಲೀನ ಸಾಧ್ಯತೆ –ಡಿಕೆಶಿ



**ಬೆಂಗಳೂರು:** ಕುಮಾರಸ್ವಾಮಿ ಅವರ ಧೋರಣೆ ನೋಡುತ್ತಿದ್ದರೆ, ಸದ್ಯದಲ್ಲೇ ಜೆಡಿಎಸ್ ಪಕ್ಷ ಬಿಜೆಪಿ ಜತೆ ವಿಲೀನವಾಗುವ ಸಾಧ್ಯತೆ ಇದೆ. ವಿಲೀನವಾದರೆ ನಮಗೂ ಒಳ್ಳೆಯದೇ. ನಾವೂ ನೇರವಾಗಿ ಬಿಜೆಪಿ ಜೊತೆ ಹೋರಾಟ ಮಾಡಬಹುದು. ಆಗ 'ಆಟಕ್ಕೆ ಮೂರು ಪಕ್ಷ, ಲೆಕ್ಕಕ್ಕೆ ಮಾತ್ರ ಎರಡು ಪಕ್ಷ' ಎಂಬ ಗೊಂದಲ ಇರುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಎಚ್ ಡಿ ಕುಮಾರಸ್ವಾಮಿಗೆ ತಿರುಗೇಟು ನೀಡಿದರು. ಕೆಪಿಸಿಸಿ ಕಚೇರಿಯಲ್ಲಿ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮುಖಂಡ ಗೋವಿಂದರಾಜ್ ಅವರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಶಿವಕುಮಾರ್ ಮಾತನಾಡಿ, ನಮ್ಮದು ಜಾತ್ಯಾತೀತ ಸಿದ್ಧಾಂತ. ಹೀಗಾಗಿ ಜಮೀರ್ ಅಹ್ಮದ್ ಖಾನ್ ಮುಖಂಡತ್ವದಲ್ಲಿ ಕಾಂಗ್ರೆಸ್ ಪಕ್ಷದ ಜೊತೆ ಗುರುತಿಸಿಕೊಳ್ಳಲು ಈ ತೀರ್ಮಾನಕ್ಕೆ ಬಂದಿದ್ದಾರೆ. ಬಿಜೆಪಿ, **3ನೇ ಪುಟಕ್ಕೆ**

## ಯಾವ ಪುರುಷಾರ್ಥಕ್ಕಾಗಿ ಕಾಂಗ್ರೆಸ್ಸಿನವರ ಹೋರಾಟ –ಜೋಶಿ



**ಬೆಂಗಳೂರು:** ಕಾಂಗ್ರೆಸ್ಸಿನವರು ಯಾವ ಪುರುಷಾರ್ಥಕ್ಕಾಗಿ ಮತ್ತು ಯಾವ ನೈತಿಕತೆ ಇಟ್ಟುಕೊಂಡು ವಿಬಿ–ಜಿ ರಾಮ್ ಜಿ ವಿರುದ್ಧ ಹೋರಾಟಕ್ಕೆ ಕರೆ ನೀಡಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಸವಾಲು ಹಾಕಿದ್ದಾರೆ. ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ವಿಕಸಿತ ಭಾರತ ಉದ್ಯೋಗ ಖಾತ್ರಿ ಮತ್ತು ಜೀವನೋಪಾಯ ಮಿಷನ್ ಇದರ ಬಗ್ಗೆ ಕಾಂಗ್ರೆಸ್ ಪಕ್ಷವು ಜ.10ರಿಂದ ಹೋರಾಟ ಮಾಡಲು ಕರೆ ನೀಡಿದೆ. 20 ವರ್ಷಗಳ **3ನೇ ಪುಟಕ್ಕೆ**






## ರಾಜ್ಯದಲ್ಲಿರುವುದು ರಬ್ಬರ್‌ಸ್ಟ್ಯಾಂಪ್ ಗೃಹ ಸಚಿವರೇ– ಎಚ್ಡಿಕೆ

ಒಂದನೇ ಪುಟದಿಂದ......

ಹೆಬ್ಬೆಟ್ಟು ಸಚಿವರಾ?. ನನಗೆ ಹಲವು ಮಾಹಿತಿಗಳು, ನೈಜ ಘಟನೆಗಳ ಬಗ್ಗೆ ಮಾಹಿತಿ ಕೊಡುವವರು ಇದ್ದಾರೆ. ಅದರ ಸತ್ಯಾಸತ್ಯತೆ ಪರಿಶೀಲಿಸಿ ಆ ಬಳಿಕ ನಾನು ಮಾಧ್ಯಮಗಳಿಗೆ ವಿವರಿಸಿದ್ದೇನೆ. ಜನತೆಗೆ ಸತ್ಯ ತಿಳಿಯಬೇಕಲ್ಲವೇ?' ಎಂದು ಹೇಳಿದರು. ಡಿಸಿಎಂ, ಯಾವ ಅಧಿಕಾರದ ಮೇಲೆ ಬಳ್ಳಾರಿಯಲ್ಲಿ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದ್ದಾರೆ. ಗೃಹ ಇಲಾಖೆಯಲ್ಲಿ ಇವರ ಹಸ್ತಕ್ಷೇಪ ಯಾಕೆ. ಡಿಸಿಎಂ ಎಂದರೆ ಅವರು ಮಂತ್ರಿ ಅಷ್ಟೇ. ಕಾಂಗ್ರೆಸ್ ಸತ್ಯ ಶೋಧನಾ ಸಮಿತಿಗೆ ಅಧಿಕಾರಿಗಳು ಯಾವ ಮಾಹಿತಿ ಕೊಡುತ್ತಾರೆ. ಕಾರ್ಯಕರ್ತರು, ಕಾಂಗ್ರೆಸ್ ನಾಯಕರು ಘಟನೆಗೆ ಕಾರಣರಾದ ಶಾಸಕರ ವಿರುದ್ದವೇ ಸತ್ಯಶೋಧನೆ ಸಮಿತಿಯ ಮುಂದೆ ದೂರು ನೀಡಿದ್ದಾರೆ. ಹಾಗಾದರೆ ನಿಮ್ಮ ತನಿಖೆಯ ಹಣೆಬರಹ ಏನು ಎಂದು ಪ್ರಶ್ನಿಸಿದರು. ಬಳ್ಳಾರಿಯಲ್ಲಿ ನಡೆದ ಇಡೀ ಪ್ರಕರಣವನ್ನು ಮುಚ್ಚಿ ಹಾಕಲು ಸರಕಾರ ಕೆಲಸ ಮಾಡುತ್ತಿದೆ. ಕೇವಲ ಬ್ಯಾನರ್ ಕಟ್ಟುವ ವಿಚಾರಕ್ಕೆ ಬೀದಿಯಲ್ಲಿ ಗುಂಡು ಹಾರಿಸ್ತಾರಾ. ಮರಣೋತ್ತರ ಪರೀಕ್ಷೆ ನಡೆದ ನಂತರ ಕೊಲೆಯಾದ ಕಾರ್ಯಕರ್ತನ ಮೃತದೇಹವನ್ನು ಸುಟ್ಟು ಹಾಕಿದ್ದು ಯಾಕೆ. ಇದಕ್ಕೆಲ್ಲಾ ಸರಕಾರ ಉತ್ತರ ಕೊಡಬೇಕಲ್ಲವೇ ಎಂದು ಎಂದಿದ್ದಾರೆ.

## ಬಿಜೆಪಿ, ಜೆಡಿಎಸ್ ವಿಲೀನ ಸಾಧ್ಯತೆ – ಡಿಕೆಶಿ

ಒಂದನೇ ಪುಟದಿಂದ......

ಜೆಡಿಎಸ್ ಬೇಗ ವಿಲೀನವಾದಷ್ಟೂ ನಮಗೇ ಒಳ್ಳೆಯದು. ಅವರು ಬೇಗ ತೀರ್ಮಾನ ಮಾಡಿದರೆ ನಾವು ನಮ್ಮ ತೀರ್ಮಾನ ಮಾಡಿಕೊಳ್ಳಬಹುದು. ಈಗ ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ ಆಡುತ್ತಿದ್ದಾರೆ ಎಂದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ನಾಯಕರೇ ಹೇಳುತ್ತಿದ್ದಾರೆ ಎಂದರು. ಬೆಂಗಳೂರು ನಗರದಲ್ಲಿ ನಮ್ಮ ಸರ್ಕಾರ ಮಾಡುತ್ತಿರುವ ಕೆಲಸವನ್ನು ಬಿಜೆಪಿ ನಾಯಕರೇ ಸ್ವಾಗತಿಸುತ್ತಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲಾಗಿದೆ, ರಸ್ತೆಗಳನ್ನು ನಿರ್ಮಿಸಲಾಗುತ್ತಿದೆ. ಖಾತಾ ಪರಿವರ್ತನೆ, ಆಸ್ತಿ ದಾಖಲೆಗಳನ್ನು ಸರಿಪಡಿಸುತ್ತಿರುವುದನ್ನು ನೋಡಿದರೆ, ನಮಗೆ ಭವಿಷ್ಯವಿಲ್ಲ ಎಂದು ಬಿಜೆಪಿ ನಾಯಕರೇ ನಮ್ಮ ಬಳಿ ಹೇಳಿಕೊಂಡಿದ್ದಾರೆ. ಹೀಗಾಗಿ ತಮ್ಮ ಅಸ್ತಿತ್ವ ಉಳಿಸಿಕೊಳ್ಳಲು ದಳದವರು ನಾವು ಫ್ರೆಂಡ್ಲಿ ಫೈಟ್ ಮಾಡುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ. ದಯವಿಟ್ಟು ಫ್ರೆಂಡ್ಲಿ ಫೈಟ್ ಬೇಡ, ನೇರವಾಗಿ ಹೋರಾಟ ಮಾಡಿ. ನೀವು ಒಟ್ಟಾಗಿ ಸೀಟು ಹಂಚಿಕೊಂಡು ಹೋರಾಟ ಮಾಡಿ. ನಿಮ್ಮ ಫ್ರೆಂಡ್ಲಿ ಫೈಟ್‌ನಿಂದ ನಿಮ್ಮ ಕಾರ್ಯಕರ್ತರಿಗೆ ಗೊಂದಲವಾಗುತ್ತದೆ. ನೇರವಾಗಿ ಹೋರಾಟ ಮಾಡಲು ನಾವು ಸಿದ್ಧವಿದ್ದೇವೆ ಎಂದು ಸವಾಲು ಹಾಕಿದರು.

## ಯಾವ ಪುರುಷಾರ್ಥಕ್ಕಾಗಿ ಕಾಂಗ್ರೆಸ್ಸಿನವರ ಹೋರಾಟ – ಜೋಶಿ

ಒಂದನೇ ಪುಟದಿಂದ......

ಹಿಂದೆ ಯೋಜನೆ ಮಾಡಿದಾಗ ವಿಕಸಿತ ಭಾರತ, ಆಸ್ತಿ ನಿರ್ಮಾಣದ ಕಲ್ಪನೆಯೇ ಇರಲಿಲ್ಲ. ಆಗ, ದೇಶ – ಜನರ ಆರ್ಥಿಕ ಸ್ಥಿತಿ ಅತ್ಯಂತ ಕಠಿಣವಾಗಿತ್ತು. ವಿಕಸಿತ ಭಾರತ ಆದಾಗ ಮೂಲಭೂತ ಸೌಕರ್ಯ, ದೀರ್ಘಾವಧಿಯ ಆಸ್ತಿಗಳಿರುವ ವಿಕಸಿತ ಗ್ರಾಮವೂ ಆಗದೇ ಇದ್ದಲ್ಲಿ ದೊಡ್ಡ ಪ್ರಮಾಣದಲ್ಲಿ ಹಳ್ಳಿಗಳು ಖಾಲಿ ಆಗಲಿವೆ ಎಂಬ ಮಹತ್ವದ ಅಂಶವೂ ಇದರಲ್ಲಿದೆ. ಕಾಲಕಾಲಕ್ಕೆ ಈ ಯೋಜನೆಯಡಿ ಬದಲಾವಣೆಗಳನ್ನು ಅವರೂ ಮಾಡಿದ್ದಾರೆ ಎಂದು ಹೇಳಿದರು. ಗ್ರಾಮೀಣ ಜನರ ಉದ್ಯೋಗದ ಹಕ್ಕನ್ನು ಇದು ಕಸಿಯಲಿದೆ ಎಂಬ ಸುಳ್ಳನ್ನು ಅವರು ಹೇಳುತ್ತಿದ್ದಾರೆ. ಇದು ಶುದ್ಧ ಸುಳ್ಳು. ಇದು ಯಾವುದೇ ರೀತಿಯ ಕೇಂದ್ರದ ಯೋಜನೆ ಅಥವಾ ಕೇಂದ್ರ ಪ್ರಾಯೋಜಿತ ಯೋಜನೆ ಮಾಡಲು ಕಾನೂನಿನ ಅಗತ್ಯವಿಲ್ಲ. ವಿಬಿ – ಜಿ ರಾಮ್ ಜಿ ಎಂಬುದು ಸಂಸತ್ತಿನ ಕಾಯ್ದೆ. ಇದು ಕೆಲಸದ ಹಕ್ಕನ್ನು ಕಸಿಯುವುದಿಲ್ಲ. ಇದನ್ನು 125 ದಿನಕ್ಕೆ ಏರಿಸಿದ್ದೇವೆ ಎಂದು ಹೇಳಿದರು.

## ಸಾಧನ ಯೋಜನೆಯಡಿ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

ಮಡಿಕೇರಿ – ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 'ಸಾಧನ ಯೋಜನೆಯಡಿ' ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲೆಯ ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿಆರ್‌ಡಬ್ಲ್ಯು ಹಾಗೂ ತಾಲ್ಲೂಕು ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಂಆರ್‌ಡಬ್ಲ್ಯುಗಳಾದ ಸೋಮವಾರಪೇಟೆ ಹಾಗೂ ಕುಶಾಲನಗರ ತಾಲ್ಲೂಕಿನವರು ಹರೀಶ್ ಟಿ.ಆರ್ ಮೊ.ಸಂ–8861428931, ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲೂಕಿನವರು ಪ್ರಥನ್ ಕುಮಾರ್ ಸಿ.ಬಿ ಮೊ.ಸಂ–9900883654 ಹಾಗೂ ಮಡಿಕೇರಿ ತಾಲ್ಲೂಕಿನವರು ರಾಜೇಶ್ ಮೊ.ಸಂ.8073192914 ಹಾಗೂ ಕಚೇರಿ ದೂ.ಸಂ. 08272–295829 ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

## ವಿಕಲಚೇತನ ಕ್ರೀಡಾಪಟುಗಳಿಗೆ ಧನಸಹಾಯ : ಅರ್ಜಿ ಆಹ್ವಾನ

ಮಂಗಳೂರು – 2025–26ನೇ ಸಾಲಿಗೆ ಸಾಧನೆ ಯೋಜನೆಯಡಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿರುವ ವಿಕಲಚೇತನರ ಕ್ರೀಡಾಪಟುಗಳಿಗೆ ಗರಿಷ್ಠ ರೂ.50 ಸಾವಿರ ಧನ ಸಹಾಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಆಯಾ ತಾಲೂಕಿನ ಎಂ.ಆರ್.ಡಬ್ಲ್ಯೂಗಳು ಮಂಗಳೂರು – 9110897458, ಬಂಟ್ವಾಳ– 9164645616, ಪುತ್ತೂರು & ಕಡಬ – 7760620538, ಸುಳ್ಯ – 8105300057, ಬೆಳ್ತಂಗಡಿ – 9480281513 ಸಂಪರ್ಕಿಸಬಹುದು.

## ಜಾನಪದ ಅಕಾಡೆಮಿ ಫೆಲೋಶಿಪ್ : ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ಜಾನಪದ ಅಕಾಡೆಮಿ ಫೆಲೋಶಿಪ್ (ಅಧ್ಯಯನ ವೇತನ) ಲೇಖನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಕಾಡೆಮಿಯ ವೆಬ್‌ಸೈಟ್ ತಿಳಿಸಿರುವ ಶೀರ್ಷಿಕೆಗಳನ್ನು ಆಧರಿಸಿ ಕ್ಷೇತ್ರಕಾರ್ಯ ನಡೆಸಿ ಅಧ್ಯಯನ ಕೃತಿಗಳನ್ನು ಸಿದ್ಧಪಡಿಸಿಕೊಡಲು ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ನಮೂನೆ, ಫೆಲೋಶಿಪ್ ಶೀರ್ಷಿಕೆಗಳು ಮತ್ತು ಹೆಚ್ಚಿನ ವಿವರಗಳಿಗೆ ಅಕಾಡೆಮಿಯ ವೆಬ್‌ಸೈಟ್ (https://janapada.karnataka.gov.in) ನಿಂದ ಮಾಹಿತಿ ಪಡೆಯಬಹುದು ಎಂದು ಅಕಾಡೆಮಿ ರಿಜಿಸ್ಟ್ರಾರ್ ತಿಳಿಸಿದ್ದಾರೆ.

## ಪಿಹೆಚ್‌ಡಿ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ/ಫೆಲೋಶಿಫ್‌ಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2025–26ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಹೆಚ್.ಡಿ. ಅಧ್ಯಯನ ಮಾಡುತ್ತಿರುವ (ಫೆ.10, 2025 ಮತ್ತು ಅದರ ನಂತರ ಪ್ರಥಮ ವರ್ಷದ ಪಿಹೆಚ್.ಡಿ ಪ್ರಾರಂಭಿಸಿರಬೇಕು) ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ)ಗೆ ಸೇರಿದ ಹೊಸ ವಿದ್ಯಾರ್ಥಿಗಳಿಂದ ಮಾತ್ರ ಮಾಸಿಕ ವ್ಯಾಸಂಗ ವೇತನ/ಫೆಲೋಶಿಫ್ ಪಡೆಯಲು ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂ.: 8050770004, ವೆಬ್‌ಸೈಟ್ https://bcwd.karnataka.gov.in, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯನ್ನು ಖುದ್ದಾಗಿ ಅಥವಾ ದೂ.ಸಂ.: 08182–222129 ನ್ನು ಸಂಪರ್ಕಿಸುವುದು.

## ಸಂಸ್ಕೃತಿ ಉಳಿಸುವ ಕೆಲಸ ಯಕ್ಷಗಾನ ಮಾಡಿದೆ – ಕ್ಯಾಪ್ಟನ್ ಚೌಟ



ಮಂಗಳೂರು: ಈ ನೆಲದ ಅಸ್ಮಿತೆ ಸನಾತನ ಸಂಸ್ಕೃತಿಯನ್ನು ಜೀವನದಲ್ಲಿ ಅಳವಡಿಸಿಕೊಂಡು ಬದುಕುತ್ತಿರುವವರು ಕರಾವಳಿಗರು. ಇಲ್ಲಿ ಕಲೆ ಮತ್ತು ಸಂಸ್ಕೃತಿ ದೊಡ್ಡ ಪಾತ್ರವನ್ನು ವಹಿಸಿಕೊಂಡಿದೆ. ಈ ನೆಲದ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸುವ ಕೆಲಸ ಯಕ್ಷಗಾನ ಮಾಡಿದೆ ಎಂದು ದಕ್ಷಿಣ ಕನ್ನಡ ಜಿಲ್ಲೆಯ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದರು. ಅಡ್ಯಾರ್ ಸಹ್ಯಾದ್ರಿ ಕಾಲೇಜು ಆವರಣದಲ್ಲಿ ಯಕ್ಷಧ್ರುವ ಪಟ್ಲ ಫೌಂಡೇಶನ್ ಘಟಕಗಳ ಸಹಯೋಗದೊಂದಿಗೆ ನಡೆದ ಯಕ್ಷಧ್ರುವ–ಯಕ್ಷ ಶಿಕ್ಷಣ ಯೋಜನೆಯ ವಿದ್ಯಾರ್ಥಿಗಳ ಯಕ್ಷಧ್ರುವ ವಿದ್ಯಾರ್ಥಿ ಸಮ್ಮಿಲನ 2025–26 ವನ್ನು ದೀಪ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು. ಯಕ್ಷಗಾನದ ಮೂಲಕ ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ ದೇಶ ಕಟ್ಟುವ ರಾಷ್ಟ್ರೀಯ ನಿರ್ಮಾಣದ ಕೆಲಸ ಮಾಡುತ್ತಿದೆ. ಯಕ್ಷಗಾನಕ್ಕೆ ದೀರ್ಘಕಾಲಿಕವಾದ ಇತಿಹಾಸ ಇದೆ. ಇದು ಹೀಗೆಯೆ ಮುಂದುವರಿಯಲಿ ಎಂದು ದ.ಕ. ಜಿಲ್ಲೆಯ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದರು.

## ಕೆನರಾ ಹೈಸ್ಕೂಲ್ ಮೈದಾನದಲ್ಲಿ 'ವಿಶಿಷ್ಟರಿಗಾಗಿ ವಿಶಿಷ್ಟ ಮೇಳ'



ಮಂಗಳೂರು: ಸೇವಾ ಭಾರತಿಯ ಅಂಗ ಸಂಸ್ಥೆಯಾದ ಆಶಾಜ್ಯೋತಿ ವತಿಯಿಂದ ಕೆನರಾ ಶಿಕ್ಷಣ ಸಂಸ್ಥೆಗಳ ಸಹಭಾಗಿತ್ವದಲ್ಲಿ ಜ.11ರಂದು ಬೆಳಗ್ಗೆ 8:30ರಿಂದ ಸಂಜೆ 4:15ರ ತನಕ ಮಂಗಳೂರಿನ ಡೊಂಗರಕೇರಿಯ ಕೆನರಾ ಹೈಸ್ಕೂಲ್ ಮೈದಾನದಲ್ಲಿ ವಿಶಿಷ್ಟರಿಗಾಗಿ ವಿಶಿಷ್ಟ ಮೇಳ 2026 ಆಯೋಜಿಸಲಾಗಿದೆ ಎಂದು ಆಶಾಜ್ಯೋತಿ ಅಧ್ಯಕ್ಷೆ ಗೀತಾ ಲಕ್ಷ್ಮೀಶ್ ತಿಳಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು ಬೆಳಿಗ್ಗೆ 9:30ಕ್ಕೆ ನಿಟ್ಟೆ ವಿಶ್ವವಿದ್ಯಾನಿಲಯ ಉಪಸಹ ಕುಲಪತಿ ಡಾ. ಶಾಂತಾ ರಾವ್ ಶೆಟ್ಟಿ ಮೇಳದ ಉದ್ಘಾಟನೆಯನ್ನು ನೆರವೇರಿಸುವರು. ಕರ್ಣಾಟಕ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಹಾಗೂ ಸಿಇಒ ರಾಘವೇಂದ್ರ ಎಸ್. ಭಟ್, ಮಂಗಳೂರು ಎಂಆರ್‌ಪಿಎಲ್ ಮಾನ ವ ಸಂಪನ್ಮೂಲ ವಿಭಾಗದ ಜಿಜಿಎಂ ಕೃಷ್ಣ ಹೆಗ್ಡೆ ಮಿಯಾರ್ ಅತಿಥಿಯಾಗಿ ಭಾಗವಹಿಸುವರು. ದ.ಕ, ಉಡುಪಿ ಜಿಲ್ಲೆಗಳ ವಿಶೇಷ ಶಾಲೆಗಳ ಮಕ್ಕಳ ಸಹಿತ ಎಲ್ಲ ವಯೋಮಾನದ ದಿವ್ಯಾಂಗರಿಗಾಗಿ ಈ ಮೇಳ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

## ಸಂಸದ ಕ್ಯಾ. ಚೌಟರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ



ಮಂಗಳೂರು : ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಮಂಗಳೂರಿನ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣದಲ್ಲಿರುವ ಸಂಸದರ ಕಚೇರಿಯಲ್ಲಿ ಇಂದು ಸಾರ್ವಜನಿಕರ ಕುಂದು–ಕೊರತೆ ಆಲಿಸಿದರು. ಈ ವೇಳೆ ಜಿಲ್ಲೆಯ ವಿವಿಧ ಕಡೆಗಳಿಂದ ಆಗಮಿಸಿದ್ದ ಸಾರ್ವಜನಿಕರು ತಮ್ಮ ಸಮಸ್ಯೆ ಹಾಗೂ ಬೇಡಿಕೆಗಳ ಕುರಿತು ಅಹವಾಲು ಸಲ್ಲಿಸಿದ್ದಾರೆ. ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಬೆಳ್ತಂಗಡಿ, ಸುಳ್ಯ ಮುಂತಾದ ಪ್ರದೇಶಗಳಿಂದ ಬಂದಿದ್ದ ಕೃಷಿಕರು ಎದುರಿಸುತ್ತಿರುವ ಅಡ್ಡಿ–ಆತಂಕವನ್ನು ಸಂಸದರ ಮುಂದೆ ತೋಡಿಕೊಂಡರು. ಇದಕ್ಕೆ ಸಂಸದರು ಸೂಕ್ತ ಮಾರ್ಗದರ್ಶನ ಮತ್ತು ಪರಿಹಾರ ನೀಡಿದರು. ಇದಲ್ಲದೇ ಸಾರ್ವಜನಿಕ ಭೇಟಿ ವೇಳೆ, ರೈಲ್ವೆ ಇಲಾಖೆ, ಹೆದ್ದಾರಿ ಇಲಾಖೆ ಸೇರಿದಂತೆ ಜಿಲ್ಲೆಯಲ್ಲಿ ನಡೆಯುತ್ತಿರುವ ಹಲವಾರು ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದ ಕೆಲವು ಸಮಸ್ಯೆ–ಬೇಡಿಕೆಗಳ ಬಗ್ಗೆಯೂ ಜನರು ಸಂಸದರ ಗಮನಕ್ಕೆ ತಂದಿದ್ದಾರೆ. ಇನ್ನು ಕೆಲವೊಂದು ಸಮಸ್ಯೆಗಳನ್ನು ಆಲಿಸಿದ ಸಂಸದ ಕ್ಯಾ. ಚೌಟ ಅವರು ಸ್ಥಳದಲ್ಲೇ ಪರಿಹಾರ ಒದಗಿಸಿದ್ದಾರೆ.

## ಕೊರಗ ಯುವ ಜನರಿಗೆ ಶಾಸಕ ಭಂಡಾರಿ ಉದ್ಯೋಗದ ಭರವಸೆ



ಉಡುಪಿ: ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಕಳೆದ 23 ದಿನಗಳಿಂದ ಕೊರಗ ಅಭಿವೃದ್ಧಿ ಸಂಘಗಳ ಒಕ್ಕೂಟ (ರಿ.) ಇವರ ವತಿಯಿಂದ ನಡೆಯುತ್ತಿರುವ ಕೊರಗ ಸಮುದಾಯದ ಯುವ ಜನರಿಗೆ ಸರಕಾರಿ ಉದ್ಯೋಗ ನೇರ ನೇಮಕಾತಿಗೆ ಒತ್ತಾಯಿಸಿ ನಿರಂತರ ಅಹೋ ರಾತ್ರಿ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಕೆಪಿಸಿಸಿ ಕಾರ್ಯಾಧ್ಯಕ್ಷ ಹಾ ಗೂ ವಿಧಾನ ಪರಿಷತ್ ಶಾಸಕ ಮಂಜುನಾಥ ಭಂಡಾರಿ ಅವರು ಭೇಟಿಕೊಟ್ಟು ಸಮಸ್ಯೆ ಯನ್ನು ಆಲಿಸಿದರು. ಈ ವೇಳೆ ಕೊರಗ ಸಮುದಾಯದ ಯುವ ಜನರು ಸರಕಾರಿ ಉದ್ಯೋಗ ಪಡೆಯುವಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಶೀಘ್ರವೇ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ಪರಿಹಾರ ಒದಗಿಸುವ ಭರವಸೆಯನ್ನು ಅವರು ನೀಡಿದರು.

## ಕೊಡಿಯಾಲ್‌ಗುತ್ತು ವೆಟ್‌ವೆಲ್‌ಗೆ ಐವನ್ ಡಿ'ಸೋಜಾ ಭೇಟಿ



ಮಂಗಳೂರು: ಮಹಾನಗರ ಪಾಲಿಕೆ ವ್ಯಾಪ್ತಿಯ ಕೊಡಿಯಾಲ್‌ಬೈಲ್ ವಾರ್ಡಿನಲ್ಲಿ ಕೊಡಿಯಾಲ್‌ಗುತ್ತು ವೆಟ್‌ವೆಲ್‌ನಿಂದ ಕೊಳಚೆ ನೀರುನ್ನು ತೋಡುಗಳಲ್ಲಿ ಬಿಟ್ಟಿದ್ದು, ಸ್ಥಳೀಯ ಬಾವಿಗಳ ನೀರು ಕಲುಷಿತಗೊಂಡು ದುರ್ನಾತ ಬೀರುತ್ತಿದ್ದು, ಇಂತಹ ಬಾವಿಗಳ ನೀರನ್ನು ಉಪಯೋಗಿಸಿದಲ್ಲಿ ಸದ್ರಿ ಪ್ರದೇಶದ ನಿವಾಸಿಗಳಿಗೆ ರೋಗ–ರುಜಿನಗಳು ಬರುವ ಸಾದ್ಯತೆ ಇದ್ದು ಸ್ಥಳೀಯ ಮಾಜಿ ಕಾರ್ಪೊರೇಟರ್ ಪ್ರಕಾಶ್ ಬಿ. ಸಾಲ್ಯಾನ್ ವಿನಂತಿ ಮೇರೆಗೆ ವಿಧಾನ ಪರಿಷತ್ ಶಾಸಕ ಐವನ್ ಡಿ'ಸೋಜಾ ಸದ್ರಿ ಪ್ರದೇಶಕ್ಕೆ ಭೇಟಿ ನೀಡಿ ವೀಕ್ಷಿಸಿದರು. ಸದ್ರಿ ಪ್ರದೇಶದ ನಾಗರಿಕರಲ್ಲಿ ಸಮಸ್ಯೆಗಳ ಬಗ್ಗೆ ತಿಳಿದುಕೊಂಡು ಕೂಡಲೇ ಇದನ್ನು ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲದೇ ಬಾವಿಗಳ ನೀರು ಸೊಳ್ಳೆಗಳ ಕಾಟದಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿದೆ ಎಂದು ತಿಳಿಸಿದರು ಈ ಬಗ್ಗೆ ಅಧಿಕಾರಿಗಳಿಗೆ ಮಾತನಾಡಿ ಅಧಿಕಾರಿಗಳಿಗೆ ಈ ಬಗ್ಗೆ ಸರಿಯಾದ ಮಾಹಿತಿಯನ್ನು ನೀಡುವುದರ ಜೊತೆಗೆ ಕೂಡಲೇ ಇದನ್ನು ಸರಿಪಡಿಸುವಂತೆ ನಗರ ಪಾಲಿಕೆ ಆಯುಕ್ತರು ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

## ಜಯಲಕ್ಷ್ಮೀ ಎಸ್. ಜೋಕಟ್ಟೆಯವರ ಕವಿತೆಗಳು ಕೃತಿ ಬಿಡುಗಡೆ



ಮಂಗಳೂರು : ದಕ್ಷಿಣ ಕನ್ನಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾನೂನು ಕಾಲೇಜು, ಮಂಗಳೂರು ಇವರ ಜಂಟಿ ಆಶ್ರಯದಲ್ಲಿ ಮುಂಬಯಿಯ ಕವಯಿತ್ರಿ ಜಯಲಕ್ಷ್ಮೀ ಎಸ್. ಜೋಕಟ್ಟೆಯವರ ಕವಿತೆಗಳು ಸಂಕಲನವು ಅವರ ಹುಟ್ಟುಹಬ್ಬದ ದಿನ ಎಸ್.ಡಿ.ಎಂ.ಲಾ ಕಾಲೇಜ್ ಸಭಾಗೃಹದಲ್ಲಿ ಬಿಡುಗಡೆಗೊಂಡಿತು. ಅಧ್ಯಕ್ಷತೆಯನ್ನು ವಹಿಸಿದ್ದ ದಕ್ಷಿಣ ಕನ್ನಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇದರ ನಿಕಟಪೂರ್ವ ಅಧ್ಯಕ್ಷರಾದ ಪ್ರದೀಪ್ ಕುಮಾರ್ ಕಲ್ಕೂರ್ ಮಾತನಾಡುತ್ತಾ ಅನುಭವದ ಮೂಸೆಯಿಂದ ಮೂಡಿಬಂದಂತಹ ಕವಿತಾ ರಚನೆಗಳು ಜನಮಾನಸವನ್ನು ತಲುಪುವಲ್ಲಿ ಯಶಸ್ವಿಯಾಗುತ್ತವೆ. ಜಯಲಕ್ಷ್ಮೀ ಅವರು ಕವನ ಸಂಕಲನ ತರಬೇಕು ಎಂದು ಬರೆದವರಲ್ಲ. ಹಾಗಾಗಿ ಅವರ ಕವನಗಳು ಗಟ್ಟಿತನವನ್ನು ಉಳಿಸಿಕೊಂಡಿವೆ.

## 'ಶ್ರೀಕೃಷ್ಣ ಲೀಲೆ–ಕಂಸ ವಧೆ' ಇಂಗ್ಲಿಷ್ ತಾಳಮದ್ದಳೆ



ಉಜಿರೆ : ಶ್ರೀ ಧ. ಮಂ. ಕಾಲೇಜಿನಲ್ಲಿ ಕಲಾ ಕೇಂದ್ರದ ಯಕ್ಷಗಾನ ವಿದ್ಯಾರ್ಥಿಗಳಿಂದ 'ಶ್ರೀಕೃಷ್ಣ ಲೀಲೆ–ಕಂಸ ವಧೆ' ಇಂಗ್ಲಿಷ್ ತಾಳಮದ್ದಳೆ ಪ್ರಸ್ತುತಿ ಕಾಲೇಜಿನ ಸಮ್ಯಗ್ದರ್ಶನ ಸಭಾಭವನದಲ್ಲಿ ನಡೆಯಿತು. ಭಾಗವತಿಕೆಯಲ್ಲಿ ದ್ವಿತೀಯ ಪದವಿ ವಿದ್ಯಾರ್ಥಿನಿ ಸಿಂಚನ ಮೂಡುಕೋಡಿ, ಚೆಂಡೆಯಲ್ಲಿ ಸಂಸ್ಕೃತ ವಿಭಾಗದ ಉಪ ನ್ಯಾಸಕ ಶ್ರೇಯಸ್ ಪಾಳಂದೆ, ಮದ್ದಳೆಯಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿ ಸುಧನ್ವ ಪಾಲ್ಗೊಂಡರು. ತೃತೀಯ ಪದವಿ ವಿದ್ಯಾರ್ಥಿಗಳಾದ ಮೌಲ್ಯ ಎಸ್. ಜೈನ್ (ಶ್ರೀ ಕೃಷ್ಣ), ಅಂಕಿತ (ಬಲರಾಮ), ದ್ವಿತೀಯ ಪದವಿ ವಿದ್ಯಾರ್ಥಿಗಳಾದ ಮನಸ್ವಿ (ಪೂತನಿ), ನಿರಂಜನ್ (ಶಕಟ), ಪ್ರಥಮ ಪದವಿ ವಿದ್ಯಾರ್ಥಿಗಳಾದ ಅನನ್ಯ ಶೆಟ್ಟಿ (ಮಾಯಾ ಪೂತನಿ), ತೇಜಸ್ (ವಿಜಯ), ವರುಣ್ (ಕಂಸ) ಅರ್ಥಧಾರಿಗಳಾಗಿದ್ದರು. ಭಾಗವತಿಕೆಯಲ್ಲಿ ದ್ವಿತೀಯ ಪದವಿ ವಿದ್ಯಾರ್ಥಿನಿ ಸಿಂಚನ ಮೂಡುಕೋಡಿ, ಚೆಂಡೆಯಲ್ಲಿ ಸಂಸ್ಕೃತ ವಿಭಾಗದ ಉಪನ್ಯಾಸಕ ಶ್ರೇಯಸ್ ಪಾಳಂದೆ, ಮದ್ದಳೆಯಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿ ಸುಧನ್ವ ಮುಂತಾದವರು ಪಾಲು ಪಡೆದರು.

## ಜ. 9–11ರವರೆಗೆ ಕದ್ರಿ ಪಾರ್ಕ್‌ನಲ್ಲಿ 'ಕಲಾ ಪರ್ಬ'



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲಾಡಳಿತ ಕರಾವಳಿ ಉತ್ಸವ ಪ್ರಯುಕ್ತ ಶರಧಿ ಪ್ರತಿಷ್ಠಾನ ಆಯೋಜಿಸುವ 'ಕಲಾ ಪರ್ಬ' ಚಿತ್ರ–ಶಿಲ್ಪ–ಸಾಂಸ್ಕೃತಿಕ ಮೇಳವು ಕದ್ರಿ ಪಾರ್ಕ್‌ನಲ್ಲಿ ನಡೆಯಲಿದೆ ಎಂದು ಚಿತ್ರಕಲಾ ಚಾವಡಿಯ ಕಾರ್ಯದರ್ಶಿ ಎಸ್.ಎಂ.ಶಿವಪ್ರಕಾಶ್ ತಿಳಿಸಿದರು. ಅವರು ಕದ್ರಿ ಪಾರ್ಕ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, 120 ಮಳಿಗೆಗಳಲ್ಲಿ ರಾಜ್ಯಾದ್ಯಂತ ಕಲಾವಿದರ ಸಾವಿರಾರು ಕಲಾಕೃತಿಗಳ ಪ್ರದರ್ಶನ ಮತ್ತು ಮಾರಾಟ ನಡೆಯಲಿದೆ. ರಾಷ್ಟ್ರಮಟ್ಟದ ಛಾಯಾಚಿತ್ರ ಪ್ರದರ್ಶನ ಮಕ್ಕಳಿಗಾಗಿ ಚಿತ್ರ ಕಲಾಸ್ಪರ್ಧೆ ನಡೆಯಲಿದೆ. ಕಲಾವಿದರಿಗೆ ಉತ್ತೇಜನ ಸಿಗಬೇಕೆಂಬ ಉದ್ದೇಶದಿಂದ ಈ ಕಾರ್ಯಕ್ರಮ ನಡೆಸಲಾಗುತ್ತದೆ.ಈ ಉತ್ಸವದಲ್ಲಿ ದೇಶದ 120ಕ್ಕೂ ಅಧಿಕ ಕಲಾವಿದರು ಪಾಲ್ಗೊಳ್ಳಲಿದ್ದು 5,000ಕ್ಕೂ ಅಧಿಕ ಕಲಾಕೃತಿಗಳು ಪ್ರದರ್ಶನಗೊಳ್ಳಲಿವೆ ಎಂದು ಹೇಳಿದರು. ಮಳಿಗೆಗಳ ಉದ್ಘಾಟನೆ ಹಾಗೂ ಶಿಲ್ಪಕಲಾ ಮಳಿಗೆಗಳ ಉದ್ಘಾಟನೆ, ಭರತನಾಟ್ಯ ನಡೆಯಲಿದೆ. ವಿಧಾನಸಭೆಯ ಸ್ಪೀಕರ್ ಯು. ಟಿ. ಖಾದರ್, ಸಚಿವ ದಿನೇಶ್ ಗುಂಡೂರಾವ್, ಸಂಸದ ಕ್ಯಾ| ಬ್ರಿಜೇಶ್ ಚೌಟ, ಶಾಸಕ ವೇದವ್ಯಾಸ ಕಾಮತ್ ಮೊದಲಾದವರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದರು.

## ಟಿಪ್ಪರ್‌ಗಳಿಗೆ ಸ್ಪೀಡ್ ಗವರ್ನರ್ ಅಳವಡಿಕೆ ಕಡ್ಡಾಯ



ಉಡುಪಿ : ಜಿಲ್ಲೆಯಲ್ಲಿ ಗಣಿಗಾರಿಕೆ ಸಂಬಂಧಿತ ಸಲಕರಣೆಗಳನ್ನು ಸಾಗಾಟ ಮಾಡುವ ವಾಹನಗಳು ಅತೀವೇಗದಿಂದ ಚಲಾಯಿಸಿಕೊಂಡು ಅಪಘಾತಕ್ಕೆ ಕಾರಣವಾಗುತ್ತಿರುವ ಹಿನ್ನೆಲೆಯಲ್ಲಿ ಆ ವಾಹನಗಳಿಗೆ 60 ಕಿ.ಮೀ. ವೇಗ ಮಿತಿಯ ಸ್ಪೀಡ್ ಗವರ್ನರ್ (ವೇಗನಿಯಂತ್ರಕ) ಕಡ್ಡಾಯವಾಗಿ ಅಳವಡಿಸುವ ಕುರಿತು ಉಡುಪಿ ಜಿಲ್ಲಾ ರಸ್ತೆ ಸುರಕ್ಷತಾ ಪ್ರಾಧಿಕಾರ ನಿರ್ಧಾರ ಕೈಗೊಂಡಿದೆ ಎಂದು ಉಡುಪಿ ಜಿಲ್ಲಾ ಪೊಲೀಸ್ ಅಧೀಕ್ಷಕ ಹರಿರಾಂ ಶಂಕರ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಗಣಿಗಾರಿಕೆ ಸಂಬಂಧಿಸಿ ಮರಳು, ಮಣ್ಣು, ಕಲ್ಲು ಸೇರಿದಂತೆ ಖನಿಜಗಳನ್ನು ಸಾಗಿಸುವ ಎಲ್ಲಾ 6 ಚಕ್ರ ಮತ್ತು ಅದಕ್ಕಿಂತ ಮೇಲ್ಪಟ್ಟ ವಾಹನಗಳಿಗೆ ಗರಿಷ್ಠ 60 ಕಿ.ಮೀ ವೇಗ ಮಿತಿಯ ಸ್ಪೀಡ್ ಗವರ್ನರ್ ಅಳವಡಿಕೆ ಕಡ್ಡಾಯ ಮಾಡಲಾಗಿದೆ. ಈ ವಾಹನಗಳು ಅತೀಯಾದ ವೇಗ ಹಾಗೂ ನಿರ್ಲಕ್ಷತನದ ಚಾಲನೆಯಿಂದ ನಿರಂತರ ವಾಗಿ ಅಪಘಾತಗಳು ಸಂಭವಿಸುತ್ತಿದ್ದು, ಆದುದರಿಂದ ಇತ್ತೀಚೆಗೆ ನಡೆದ ರಸ್ತೆ ಸುರಕ್ಷತಾ ಪ್ರಾಧಿ ಕಾರದ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ.

## ಎಸ್.ಡಿ.ಎಂ ಕಾಲೇಜು ವಾರ್ಷಿಕ ಸಂಚಿಕೆ 'ಮನೀಷಾ' ಬಿಡುಗಡೆ



ಉಜಿರೆ: ಶ್ರೀ ಧ. ಮಂ. ಕಾಲೇಜಿನ 2024–25 ನೇ ಸಾಲಿನ ವಾರ್ಷಿಕ ಸಂಚಿಕೆ 'ಮನೀಷಾ'ವನ್ನು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಹಾಗೂ ಎಸ್.ಡಿ.ಎಂ. ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರು ಧರ್ಮಸ್ಥಳದಲ್ಲಿ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ, ಮಾತೃಶ್ರೀ ಹೇಮಾವತಿ ವೀ. ಹೆಗ್ಗಡೆ, ಬೆಂಗಳೂರಿನ ಎಸ್.ಡಿ.ಎಂ. ನ್ಯಾಚುರೋಪತಿ ಚಿಕಿತ್ಸಾ ಕೇಂದ್ರ 'ಕ್ಷೇಮವನ'ದ ಕಾರ್ಯನಿರ್ವಾಹಕ ನಿರ್ದೇಶಕಿ ಶ್ರದ್ಧಾ ಅಮಿತ್, ಉಜಿರೆ ಎಸ್‌ಡಿ.ಎಂ. ಎಜುಕೇಶನಲ್ ಸೊಸೈಟಿ ಕಾರ್ಯದರ್ಶಿ ಡಾ. ಸತೀಶ್ಚಂದ್ರ ಎಸ್., ಕಾಲೇಜು ಪ್ರಾಂಶುಪಾಲ ಡಾ. ವಿಶ್ವನಾಥ ಪಿ., ಉಪ ಪ್ರಾಂಶುಪಾಲೆ ನಂದ ಕುಮಾರಿ ಕೆ.ಪಿ., ಆಡಳಿತಾಂಗ ಕುಲಸಚಿವ ಡಾ. ಶ್ರೀಧರ ಎನ್. ಭಟ್, ಡೀನ್ ಗಳಾದ ಡಾ. ಸೌಮ್ಯ ಬಿ.ಪಿ. (ಸ್ನಾತಕೋತ್ತರ ಕೇಂದ್ರ), ಡಾ. ಭಾಸ್ಕರ ಹೆಗಡೆ (ಕಲಾ ನಿಕಾಯ), ಐಕ್ಯೂಎಸಿ ಸಂಯೋಜಕ ಗಜಾನನ ಆರ್. ಭಟ್, ಮನೀಷಾ ಸಂಚಿಕೆಯ ಕಾರ್ಯನಿರ್ವಾಹಕ ಸಂಪಾದಕ ಡಾ. ರಾಜಶೇಖರ ಹಳೆಮನೆ, ಸಂಪಾದಕೀಯ ಮಂಡಳಿ ಸದಸ್ಯರಾದ ಡಾ. ಮಲ್ಲಿಕಾರ್ಜುನ ಎನ್., ಡಾ. ಮಂಜುಶ್ರೀ ಆರ್., ವಿದ್ಯಾರ್ಥಿ ಸಂಪಾದಕರಾದ ಶ್ರೇಯಾ ಮಿಂಚಿನಡ್ಕ (ತೃತೀಯ ಬಿಎ), ಚಿಂತನ (ತೃತೀಯ ಬಿಎಸ್ಸಿ), ಚಂದನ್ ಎಂ.ಎ. (ತೃತೀಯ ಬಿಎ), ಗಿಂಡರ್ ಶರಣಪ್ಪ ಅಡಿವೆಪ್ಪ (ತೃತೀಯ ಬಿಎ) ಉಪಸ್ಥಿತರಿದ್ದರು.

## ಸುದ್ದಿ ತುಣುಕು

ಕೆ.ಆರ್.ಪುರಂ ಕ್ಷೇತ್ರದ ಹೊರಮಾವು ಅಗರ ವಸತಿ ಪ್ರದೇಶದ 2 ಎಕರೆ 5 ಗುಂಟೆಯಲ್ಲಿ ನಿರ್ಮಾಣಗೊಂಡ ಮನೆಗಳಿಗೆ ಪಾಲಿಕೆಯ ಜಂಟಿ ಆಯುಕ್ತೆ ನೋಟಿಸ್ ನೀಡಿದ್ದಾರೆ.

ಶಿರೂರು ಶ್ರೀಗಳು ಪರ್ಯಟನೆಯ ಬಳಿಕ ಶಿರೂರು ಮೂಲ ಮಠಕ್ಕೆ ಆಗಮಿಸಲಿದ್ದು, ಅಲ್ಲಿಂದ ಪಟ್ಟದ ದೇವರ ಸಮೇತ ಶೋಭಾ ಯಾತ್ರೆಯಲ್ಲಿ ಪುರಪ್ರವೇಶ ಮಾಡಲಿದ್ದಾರೆ.

ಬಳ್ಳಾರಿಯ ನೂತನ ಎಸ್‌ಪಿಯಾಗಿ ಅಧಿಕಾರ ಸ್ವೀಕರಿಸಿದ ಸುಮನ್ ಪನ್ನೇಕರ್ ಅವರು ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಖ್ಯಾತ ಪರಿಸರವಾದಿ, ಲೇಖಕ ಹಾಗೂ ಸಂಶೋಧಕ ಡಾ.ಮಾಧವ್ ಗಾಡ್ಗೀಳ್ ಅವರು ಪುಣೆಯ ಪ್ರಯಾಗ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು. ಕೆಲಕಾಲದಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಇವರಿಗೆ 83 ವರ್ಷ ವಯಸ್ಸಾಗಿತ್ತು.

ಬಿಜೆಪಿ ಕಾರ್ಯಕರ್ತೆ ವಿವಸ್ತ್ರಗೊಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ಅಮಾನತು ಮಾಡಬೇಕು ಎಂದು ಪ್ರತಿಭಟನೆ ನಡೆಸುತ್ತಿದ್ದ ಬಿಜೆಪಿ ಮಹಿಳಾ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಬಾಂಗ್ಲಾದೇಶದಲ್ಲಿನ ಹಿಂದೂಗಳ ಮೇಲಿನ ಕ್ರೌರ್ಯ ನಿಲ್ಲಿಸಲು ಕ್ರಮ ವಹಿಸುವಂತೆ ಪ್ರಧಾನಿ ಮೋದಿ ಅವರಿಗೆ ಪೇಜಾವರ ಶ್ರೀಗಳು ಪತ್ರ ಬರೆದಿದ್ದಾರೆ.

ಗಾಂಜಾ ಮತ್ತಿನಲ್ಲಿ ರೈಲು ಹರಿದು ಕೈ ಕಟ್ ಆದರೂ ಅದರ ಪರಿವೆಯೇ ಇಲ್ಲದೆ ಅಡ್ಡಾಡುತ್ತಿದ್ದ ಯುವಕನನ್ನು ಹರಸಾಹಸಪಟ್ಟು ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ಕೊಡಿಸಿದ ಘಟನೆ ದೇವನಹಳ್ಳಿಯಲ್ಲಿ ತಡವಾಗಿ ಬೆಳಕಿಗೆ ಬಂದಿದೆ.

ಸತೀಶ್ ರೆಡ್ಡಿ ಅಂಗರಕ್ಷಕರು ಫೈರಿಂಗ್ ಮಾಡಿದಕ್ಕೆ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಸಾವನ್ನಪ್ಪಿದ್ದಾನೆಂದು ಪೊಲೀಸರು ತಿಳಿಸಿದ್ದಾರೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ.

ಫೇಸ್‌ಬುಕ್‌ನಲ್ಲಿ ಸುಳ್ಯ ಶಾಸಕಿ ಭಾಗೀರಥಿ ಮುರುಳ್ಯ ವಿರುದ್ಧ ಅವಹೇಳನಕಾರಿ ಸಂದೇಶವನ್ನು ಹಾಕಿದ ವಿಚಾರಕ್ಕೆ ಸಂಬಂಧಿಸಿದಂತೆ ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರರ್ಜಿ ನೀಡಲಾಗಿದೆ.

ಹಾವೇರಿ ಜಿಲ್ಲೆ ಜನ ಆರು ಜನ ಕಾಂಗ್ರೆಸ್ ಶಾಸಕರನ್ನು ಆರಿಸಿ ಕಳುಹಿಸಿ ಶಕ್ತಿ ತುಂಬಿದ್ದೀರಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಮರ್ಯಾದಾ ಹತ್ಯೆ ನಡೆದ ಇನಾಂ ವೀರಾಪುರ ಗ್ರಾಮಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ.ಶ್ಯಾಮ್ ಭಟ್ ಭೇಟಿ ನೀಡಿ, ದೌರ್ಜನ್ಯಕ್ಕೊಳಗಾದ ಕುಟುಂಬದವರಿಂದ ಮಾಹಿತಿ ಪಡೆದರು.

ಧಾರವಾಡದ ಬಿಜೆಪಿ ಮುಖಂಡ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಶಾಸಕ ವಿನಯ್ ಕುಲಕರ್ಣಿ ವಿರುದ್ಧದ ಸಾಕ್ಷಿಗಳ ವಿಚಾರಣೆ ಬಾಕಿಯಿರುವ ಸಂಬಂಧ ವಿವರಣೆ ನೀಡುವಂತೆ ಹೈಕೋರ್ಟ್ ಪ್ರಾಸಿಕ್ಯೂಷನ್ ಪರ ವಕೀಲರಿಗೆ ನಿರ್ದೇಶನ ನೀಡಿದೆ.

2026ರ ಏಪ್ರಿಲ್‌ನಿಂದ ಮನೆ - ವಸತಿಗಳ ಪಟ್ಟಿ ಮಾಡಿ ಬಳಿಕ 2027ಕ್ಕೆ ಜನಸಂಖ್ಯಾ ಗಣತಿ ಕಾರ್ಯ ಆರಂಭವಾಗಲಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

## ಮಾವಿನಕಾಯಿ ಮಸಾಲೆ ಅನ್ನ



**ಬೇಕಾಗುವ ಸಾಮಾಗ್ರಿಗಳು :**

ಸೋನಾ ಮಸೂರಿ ಅಕ್ಕಿ - 2 ಕಪ್
ಮಾವಿನ ತುರಿ - 1/2 ಕಪ್
ಹಸಿಮೆಣಸಿನಕಾಯಿ - 5
ಬೆಳ್ಳುಳ್ಳಿ - 5 ಎಸಳು
ಈರುಳ್ಳಿ - 2 ಚಿಕ್ಕದು
ಕೊತ್ತಂಬರಿ ಸೊಪ್ಪು - ಸ್ವಲ್ಪ
ಜೀರಿಗೆ - 1/2 ಚಮಚ
ಕಾಳು ಮೆಣಸು - 5 ಕಾಳು
ತೆಂಗಿನ ಎಣ್ಣೆ - 5 ಚಮಚ
ಸಾಸಿವೆ - 1 ಚಮಚ
ಕರಿಬೇವು ಒಗ್ಗರಣೆಗೆ
ಕಡ್ಲೆ ಬೇಳೆ - 1 ಚಮಚ
ಉದ್ದಿನ ಬೇಳೆ - 1 ಚಮಚ
ನೆಲಕಡ್ಲೆ - 1 ಚಮಚ
ಅರಶಿನ - ಚಿಟಿಕೆ
ಉಪ್ಪು - ರುಚಿಗೆ

**ಮಾಡುವ ವಿಧಾನ :**

ಮೊದಲಿಗೆ ಕುಕ್ಕರಿನಲ್ಲಿ ಅಕ್ಕಿ ಹಾಕಿ ಎರಡರ ಅಳತೆಯಲ್ಲಿ ನೀರು, ಸ್ವಲ್ಪ ಉಪ್ಪು ಸೇರಿಸಿ ಎರಡು ವಿಸಿಲ್ ಬರುವ ಹಾಗೇ ಬೇಯಿಸಿಕೊಳ್ಳಬೇಕು. ನಂತರ ಒಂದು ಮಿಕ್ಸಿ ಜಾರಿಗೆ ಹಸಿ ಮೆಣಸಿನ ಕಾಯಿ, ಬೆಳ್ಳುಳ್ಳಿ, ಅರ್ಧ ಈರುಳ್ಳಿ, ಸ್ವಲ್ಪ ಕೊತ್ತಂಬರಿ ಸೊಪ್ಪು, ಅರ್ಧ ಸ್ಪೂನ್ ಜೀರಿಗೆ, ಕಾಳು ಮೆಣಸು, ಮಾವಿನ ತುರಿ ಸೇರಿಸಿ ನೀರು ಹಾಕದೆ ತರಿತರಿಯಾಗಿ ರುಬ್ಬಿ ಕೊಂಡು, ನಂತರ ಬಾಣಲೆಗೆ ಎಣ್ಣೆ ಹಾಕಿ ಸಾಸಿವೆ, ಕರಿಬೇವು, ಇಂಗು, ಸಣ್ಣಗೆ ಹೆಚ್ಚಿದ ಈರುಳ್ಳಿ, ಶೇಂಗಾ, ಕಡ್ಲೆ ಬೇಳೆ ಉದ್ದಿನ ಬೇಳೆ ಒಗ್ಗರಣೆ ಮಾಡಿ ರುಬ್ಬಿದ ಮಿಶ್ರಣವನ್ನು ಹಾಕಿ ಅದಕ್ಕೆ ಅರಿಶಿನ, ಉಪ್ಪು ಸೇರಿಸಿ ಚೆನ್ನಾಗಿ ಫ್ರೈ ಮಾಡಿ ಅದಕ್ಕೆ ಅನ್ನ ಹಾಕಿ ಚೆನ್ನಾಗಿ ಕಲಸಿದರೆ ರುಚಿಯಾದ ಮಾವಿನ ಕಾಯಿ ಮಸಾಲೆ ಅನ್ನ ಸವಿಯಲು ಸಿದ್ಧ.

## ನರೇಂದ್ರ ಮೋದಿ ನಮ್ಮ ಮೇಲೆ ಕೋಪಕೊಂಡಿದ್ದಾರೆ : ಟ್ರಂಪ್



ವಾಷಿಂಗ್ಟನ್: ಭಾರತದ ಮೇಲೆ ಹೇರಿರುವ ಸುಂಕದಿಂದಾಗಿ ಪ್ರಧಾನಿ ನರೇಂದ್ರ ಮೋದಿ ನಮ್ಮ ಮೇಲೆ ಕೋಪಕೊಂಡಿದ್ದಾರೆ, ಅವರು ಸಂತೋಷವಾಗಿಲ್ಲ ಎಂಬುದು ನಮಗೆ ಗೊತ್ತು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. "ನನಗೆ ಮೋದಿ ಅವರೊಂದಿಗೆ ಉತ್ತಮ ಸಂಬಂಧವಿದೆ. ಅವರು ನನ್ನ ಬಗ್ಗೆ ಅಷ್ಟೊಂದು ಸಂತೋಷವಾಗಿಲ್ಲ. ಏಕೆಂದರೆ ಅವರು ಈಗ ತೈಲವನ್ನು ತಯಾರಿಸುತ್ತಿಲ್ಲವಾದ್ದರಿಂದ ಅವರು ಬಹಳಷ್ಟು ಸುಂಕಗಳನ್ನು ಪಾವತಿಸುತ್ತಿದ್ದಾರೆಂದು ನಿಮಗೆ ತಿಳಿದಿದೆ, ಆದರೆ ಅವರು ಈಗ ರಷ್ಯಾದಿಂದ ತೈಲ ಖರೀದಿಸುವುದನ್ನು ಗಣನೀಯವಾಗಿ ಕಡಿಮೆ ಮಾಡಿದ್ದಾರೆ" ಎಂದು ಟ್ರಂಪ್ ಹೇಳಿದರು.

## ಆಪರೇಷನ್ ಅಬ್ಸೊಲ್ಯೂಟ್ ರೆಸೊಲ್ವ್ ವಿರುದ್ಧ ಕಿಡಿಕಾರಿದ ಚೀನಾ ಅಧ್ಯಕ್ಷ



ಬೀಜಿಂಗ್: ಅಮೆರಿಕವು ವೆನೆಜುವೆಲಾ ಅಧ್ಯಕ್ಷ ನಿಕೋಲಸ್ ಮಡುರೊರನ್ನು ಬಂಧಿಸಿದ ನಂತರ ಪ್ರತಿಕ್ರಿಯಿಸಿದ ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ಇದು ಏಕಪಕ್ಷೀಯ ಮತ್ತು ನೆರೆಯ ರಾಷ್ಟ್ರಗಳನ್ನು ಬೆದರಿಸುವ ಕ್ರಮ ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ. ಈ ಬಗ್ಗೆ ಬೀಜಿಂಗ್‌ನಲ್ಲಿ ಮಾತನಾಡಿದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ಆಪರೇಷನ್ ಅಬ್ಸೊಲ್ಯೂಟ್ ರೆಸೊಲ್ವ್ ವಿರುದ್ಧ ಕಿಡಿಕಾರಿದ್ದಾರೆ. ಅಲ್ಲದೆ, ಸಾರ್ವಭೌಮತ್ವವು ಅಂತರಾಷ್ಟ್ರೀಯ ಸಂಬಂಧಗಳ ತಳಹದಿಯಾಗಿರಬೇಕು ಎಂದು ಹೇಳಿದ್ದಾರೆ. ದುವರೆದು ಮಾತನಾಡಿದ ಕ್ಸಿ, ಇಂದು ಜಗತ್ತು ಶತಮಾನದಲ್ಲಿ ಕಂಡರಿಯದ ಬದಲಾವಣೆಗಳು ಮತ್ತು ಪ್ರಕ್ಷುಬ್ಧತೆಗೆ ಒಳಗಾಗುತ್ತಿದೆ ಎಂದರು.

## ದಂಗೆ ಬಗ್ಗೆ ಎಚ್ಚರಿಕೆ ನೀಡಿದ ಖಮೇನಿ



ದುಬೈ: ಇರಾನ್‌ನಲ್ಲಿ ತಮ್ಮ ವಿರುದ್ಧ ನಡೆಯುತ್ತಿರುವ ದಂಗೆ ಬಗ್ಗೆ ಎಚ್ಚರಿಕೆ ನೀಡಿರುವ ದೇಶದ ಪರಮೋಚ್ಚ ನಾಯಕ ಅಯತೋಲ್ಲಾ ಅಲಿ ಖಮೇನಿ, 'ಗಲಭೆಕೋರರನ್ನು ಸುಮ್ಮನಾಗಿಸಬೇಕು ಹಾಗೂ ಅವರನ್ನು ಅವರ ಸ್ಥಾನದಲ್ಲಿ ಇರಿಸಬೇಕು' ಎಂದು ಗುಡುಗಿದ್ದಾರೆ. ಗಲಭೆಗಳ ಬಗ್ಗೆ ಇದೇ ಮೊದಲ ಬಾರಿ ಪ್ರತಿಕ್ರಿಯೆ ನೀಡಿದರು. ಈಗಾಗಲೇ ಇರಾನ್ ದಂಗೆಯಲ್ಲಿ 10 ಪ್ರತಿಭಟನಾಕಾರರು ಅಸುನೀಗಿದ್ದಾರೆ. ಪ್ರತಿಭಟನಾಕಾರರನ್ನು ಕೊಂದರೆ ಹುಷಾರ್ ಎಂದು ಅಮೆರಿಕ ಅಧ್ಯಕ್ಷ ಟ್ರಂಪ್ ಕೂಡ ಗುಡುಗಿದ್ದರು.

## ಸೌದಿಗೆ ಯೆಮೆನ್ ಬಂಡುಕೋರರ ಸಡ್ಡು



ಯೆಮೆನ್ : ಯುಎಇ ಬೆಂಬಲಿತ ಯೆಮೆನ್ ಪ್ರತ್ಯೇಕತಾವಾದಿಗಳ ವಿರುದ್ಧ ಸೌದಿ ಅರೇಬಿಯಾ 2 ಬಾರಿ ದಾಳಿ ಮಾಡಿದ್ದರೂ ಅದಕ್ಕೆ ಜಗ್ಗದ ಬಂಡುಕೋರರು, ದಕ್ಷಿಣ ಯೆಮೆನ್ ಸ್ವತಂತ್ರ ರಾಷ್ಟ್ರಕ್ಕಾಗಿ ಪ್ರತ್ಯೇಕ ಸಂವಿಧಾನ ಘೋಷಿಸಿದ್ದಾರೆ.ದಕ್ಷಿಣ ಯೆಮೆನ್ ಸ್ಥಾಪನೆ ಮಾಡುವ ಇವರ ನಡೆಯ ವಿರುದ್ಧ ಸೌದಿ ಅರೇಬಿಯಾ ವಾಯುದಾಳಿ ಮಾಡಿತ್ತು. ಇದನ್ನು ನಿರ್ಲಕ್ಷಿಸಿರುವ ಬಂಡುಕೋರರು ಪ್ರತ್ಯೇಕ ಸಂಬೀಧಾನ ಘೋಷಿಸಿ ಯುದ್ಧಪೀಡಿತ ದೇಶದ ಇತರ ಬಣಗಳು ಈ ಕ್ರಮವನ್ನು ಒಪ್ಪಿಕೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಇದರಿಂದ ಸಂಘರ್ಷ ಉಲ್ಬಣಿಸುವ ಸಾಧ್ಯತೆ ಇದೆ. ಈ ನಡುವೆ ಸೌದಿ ದಾಳಿಯಿಂದ ವಿಚಲಿತ ಆಗಿರುವ ಯುಎಇ, ಯೆಮೆನ್‌ನಲ್ಲಿನ ತನ್ನೆಲ್ಲ ಪಡೆಗಳ ವಾಪಸಾತಿ ಘೋಷಿಸಿದೆ.

## ಬಾಂಗ್ಲಾದೇಶಕ್ಕೆ ಐಸಿಸಿ ವಾರ್ನಿಂಗ್..!



ದುಬೈ: 2026ರ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯನ್ನಾಡಲು ನಾವು ಭಾರತಕ್ಕೆ ಬರಲ್ಲ ಎಂದಿದ್ದ ಬಾಂಗ್ಲಾದೇಶ ತಂಡಕ್ಕೆ ಐಸಿಸಿ ಬಿಸಿ ಮುಟ್ಟಿಸಿದೆ. 2026ರ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯು ಮುಂಬರುವ ಫೆಬ್ರವರಿ 07ರಿಂದ ಆರಂಭವಾಗಲಿದ್ದು, ಟೂರ್ನಿಗೆ ಭಾರತ ಹಾಗೂ ಶ್ರೀಲಂಕ ಜಂಟಿ ಆತಿಥ್ಯ ವಹಿಸಿವೆ. ಭಾರತದಲ್ಲಿ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯನ್ನು ಆಡಿ ಇಲ್ಲದಿದ್ದರೇ ಟೂರ್ನಿಯಿಂದಲೇ ಹೊರಹೋಗಿ ಎನ್ನುವ ಖಡಕ್ ಎಚ್ಚರಿಕೆಯನ್ನು ಬಾಂಗ್ಲಾದೇಶಕ್ಕೆ ಐಸಿಸಿ ರವಾನಿಸಿದೆ ಎಂದು ವರದಿಯಾಗಿದೆ.

## ಶೋರ್ಟ್ ಮರೀನ್ ಭಾರತ ಮಹಿಳಾ ಹಾಕಿ ತಂಡಕ್ಕೆ ಕೋಚ್



ಹೊಸದಿಲ್ಲಿ : ಭಾರತೀಯ ಮಹಿಳಾ ಹಾಕಿ ತಂಡದ ಮಾಜಿ ಮುಖ್ಯ ಕೋಚ್, ನೆದರ್‌ಲ್ಯಾಂಡ್ಸ್‌ನ ಶೋರ್ಟ್ ಮರೀನ್ ಮತ್ತೆ ತಂಡದ ಮುಖ್ಯ ಕೋಚ್ ಆಗಿ ವಾಪಸಾಗಲಿದ್ದಾರೆ. ಈ ವಿಷಯವನ್ನು ಹಾಕಿ ಇಂಡಿಯಾ ಅಧಿಕೃತವಾಗಿ ಖಚಿತಪಡಿಸಿದೆ. ಮಹಿಳಾ ತಂಡದ ಮುಖ್ಯ ಕೋಚ್ ಆಗಿದ್ದ ಹರೇಂದ್ರ ಸಿಂಗ್ ರಾಜೀನಾಮೆ ನೀಡಿದ ಒಂದು ತಿಂಗಳ ಬಳಿಕ ಈ ಬೆಳವಣಿಗೆ ನಡೆದಿದೆ. ಹರೇಂದ್ರ ಸಿಂಗ್ ಕಿರುಕುಳ ನೀಡುತ್ತಾರೆ ಮತ್ತು ಅವರ ತರಬೇತಿ ಪರಿಣಾಮಕಾರಿಯಾಗಿಲ್ಲ ಎಂದು ಆಟಗಾರ್ತಿಯರು ದೂರಿದ ಬಳಿಕ ಅವರು ರಾಜೀನಾಮೆ ನೀಡಿದ್ದರು.

## ಐಪಿಎಲ್ ಪ್ರಸಾರವನ್ನು ನಿಷೇಧಿಸಿದ ಬಾಂಗ್ಲಾದೇಶ




ಡಾಕಾ: ಬಾಂಗ್ಲಾದೇಶ ಸರ್ಕಾರವು ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಪಂದ್ಯಗಳ ಪ್ರಸಾರವನ್ನು ಅನಿರ್ದಿಷ್ಟಾವಧಿಗೆ ನಿಷೇಧಿಸಿದೆ. ಐಪಿಎಲ್‌ನಿಂದ ಬಾಂಗ್ಲಾ ವೇಗದ ಬೌಲರ್ ಮುಸ್ತಫಿಝುರ್ ರೆಹಮಾನ್ ಅವರನ್ನು ಹೊರಗಿಟ್ಟ ಬೆನ್ನಲ್ಲೇ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಬಾಂಗ್ಲಾದೇಶದ ಕ್ರೀಡಾ ಸಚಿವಾಲಯದ ಉಸ್ತುವಾರಿ ಸಚಿವ ಆಸಿಫ್ ನಜ್ರುಲ್, ಬಾಂಗ್ಲಾದಲ್ಲಿ ಐಪಿಎಲ್ ಪ್ರಸಾರವನ್ನು ನಿಷೇಧಿಸುವ ಸೂಚನೆ ನೀಡಿದ್ದರು.

## ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ತಾಳೆಯಾಗದ ಸಂಖ್ಯೆ



ಬೆಂಗಳೂರು : ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಪೂರ್ವಭಾವಿ ಪ್ರಕ್ರಿಯೆ ಕರ್ನಾಟಕದಲ್ಲೂ ಆರಂಭವಾಗಿದ್ದು, 5.57 ಕೋಟಿ ಮತದಾರರ ಪೈಕಿ 3.05 ಕೋಟಿ ಜನರ ವಿವರಗಳಷ್ಟೇ ತಾಳೆಯಾಗಿದೆ. ಭಾರತೀಯ ಚುನಾವಣಾ ಆಯೋಗವು ದೇಶದ ಹಲವು ರಾಜ್ಯದಲ್ಲಿ ಎಸ್‌ಐಆರ್ ನಡೆಸುತ್ತಿದೆ. ಕರ್ನಾಟಕದಲ್ಲಿ ಎಸ್‌ಐಆರ್‌ಗೆ ಪೂರ್ವಭಾವಿಯಾಗಿ 2002ರ ಮತ್ತು 2025ರ ಮತದಾರರ ಪಟ್ಟಿಯನ್ನು ಹೋಲಿಕೆ ಮಾಡಲಾಗುತ್ತಿದೆ. ಈ ಕೆಲಸ ಬಹುತೇಕ ಪೂರ್ಣಗೊಂಡಿದ್ದು, ರಾಜ್ಯದ 2.51 ಕೋಟಿ ಮತದಾರರ ವಿವರ ತಾಳೆಯಾಗಿಲ್ಲ. ಬೆಂಗಳೂರು 85.14 ಲಕ್ಷ ಮತದಾರರ ವಿವರಗಳು ಹೊಂದಿಕೆಯಾಗಿಲ್ಲ.

## ಕೋಗಿಲು ಪ್ರಕರಣದಲ್ಲಿ ಮನೆ ಪಡೆಯಲು ಅರ್ಹರೆಷ್ಟು?



ಬೆಂಗಳೂರು : ಬೆಂಗಳೂರು ನಗರದ ಯಲಹಂಕ ಸಮೀಪದ ಕೋಗಿಲು ಅಕ್ರಮ ನಿವಾಸಿಗಳ ತೆರವು ಪ್ರಕರಣಕ್ಕೆ ಸಂಬಂಧಿಸಿದಂತೆ ಪುನರ್ವಸತಿ ಪ್ರಕ್ರಿಯೆ ಈಗ ಅಂತಿಮ ಹಂತಕ್ಕೆ ತಲುಪಿದ್ದು, ಮನೆ ಕಳೆದುಕೊಂಡವರ ಪೈಕಿ ಹೊಸ ಮನೆ ಪಡೆಯಲು ಸಲ್ಲಿಕೆಯಾಗಿದ್ದ 262 ಅರ್ಜಿಗಳ ಪೈಕಿ ಕೇವಲ 37 ಮಂದಿ ಅರ್ಹರಾಗಿದ್ದಾರೆ ಎನ್ನಲಾಗಿದೆ. ರಾಜೀವ್ ಗಾಂಧಿ ವಸತಿ ನಿಗಮದ ಕಠಿಣ ಷರತ್ತುಗಳ ಅನ್ವಯ ಅಧಿಕಾರಿಗಳು ಅಂತಿಮ ಹಂತದ ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ. ಒಟ್ಟು 262ಮಂದಿ ಪುನರ್ವಸತಿಗಾಗಿ ಅರ್ಜಿ ಸಲ್ಲಿಸಿದ್ದರು.

## ಮಾಜಿ ಸೈನಿಕರಿಗೆ ಭೂ ಮಂಜೂರಾತಿ ಅರ್ಜಿ ಬಾಕಿ:ಲೋಕಾಯುಕ್ತ ಬೇಸರ



ಕಲಬುರಗಿ : ಮಾಜಿ ಸೈನಿಕರಿಗೆ ಭೂ ಮಂಜೂರಾತಿ ಮಾಡದೇ ಅರ್ಜಿಗಳನ್ನು ಬಾಕಿ ಇರಿಸಿಕೊಂಡ ಜಿಲ್ಲಾಡಳಿತದ ಕ್ರಮಕ್ಕೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ತೀವ್ರ ಬೇಸರ ವ್ಯಕ್ತಪಡಿಸಿದರು. ಜಿಲ್ಲೆಯಾದ್ಯಂತ 55 ಅರ್ಜಿಗಳ ಪೈಕಿ ಏಳು ಪ್ರಕರಣಗಳಲ್ಲಿ ಭೂಮಿ ಹಂಚಿಕೆ ಮಾಡಲಾಗಿದೆ. ದೇಶಕ್ಕಾಗಿ ತಮ್ಮ ಕುಟುಂಬವನ್ನು ಮರೆತು ಹೋರಾಟ ಮಾಡಿದ ಮಾಜಿ ಸೈನಿಕರ ಬೇಡಿಕೆಯನ್ನು ಈಡೇರಿಸದೇ ಇರುವುದು ಸರಿಯಲ್ಲ. ಕೂಡಲೇ ಉಳಿದ ಅರ್ಜಿಗಳನ್ನು ವಿಲೇವಾರಿ ಮಾಡಿ ವರದಿಯನ್ನು ತಮಗೆ ಸಲ್ಲಿಸಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರಿಗೆ ತಾಕೀತು ಮಾಡಿದರು.

## ಕೆಡಿಪಿ ಸಭೆಯಲ್ಲಿ ಪರಸ್ಪರ ಕೈ ಕೈ ಮಿಲಾಯಿಸಿದ ಶಾಸಕರು



ಬೀದರ್: ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಜಿಲ್ಲಾಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಹುಮನಾಬಾದ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ್ ಹಾಗೂ ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ್ ಅವರು ಪರಸ್ಪರ ಕೈಕೈ ಮಿಲಾಯಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿಕೊಂಡರು. ಇದರಿಂದ ಸಭೆಯಲ್ಲಿ ಗದ್ದಲದ ವಾತಾವರಣ ನಿರ್ಮಾಣವಾಯಿತು. ಬಳಿಕ ಸಭೆಯನ್ನೇ ಮುಂದೂಡಲಾಯಿತು. ಕ್ಷೇತ್ರದ ಅರಣ್ಯ ಜಮೀನಿನ ಕುರಿತು ಸಭೆಯಲ್ಲಿ ಚರ್ಚೆ ನಡೆಯುತ್ತಿತ್ತು. ಚರ್ಚೆಯಲ್ಲಿ ಭಾಗವಹಿಸಿ ಡಾ. ಸಿದ್ದಲಿಂಗಪ್ಪ ಪಾಟೀಲ ಹಾಗೂ ಭೀಮರಾವ್ ಪಾಟೀಲ್ ಮಾತನಾಡುತ್ತಿದ್ದರು.

## ಕಾನೂನು ಬಾಹಿರವಾಗಿ ನಿರ್ಮಾಣವಾಗುತ್ತಿದ್ದ ಮಸೀದಿ ಕಾಮಗಾರಿ ಸ್ಥಗಿತ !



ಹುಬ್ಬಳ್ಳಿ: ಇಲ್ಲಿಯ ನೇಕಾರನಗರದ ಶಿವನಾಗ ಬಡಾವಣೆಯಲ್ಲಿ ಕಾನೂನು ಬಾಹಿರವಾಗಿ ನಿರ್ಮಾಣವಾಗುತ್ತಿರುವ ಮಸೀದಿ ಕಾಮಗಾರಿಯನ್ನು ಸ್ಥಗಿತಗೊಳಿಸಿ, ಅರ್ಧ ಭಾಗದಷ್ಟು ತೆರವುಗೊಳಿಸಲಾಗಿದೆ. ಇನ್ನುಳಿದ ಭಾಗವನ್ನು ಒಂದು ವಾರದ ಒಳಗೆ ತೆರವು ಮಾಡಬೇಕು' ಎಂದು ನೇಕಾರನಗರ ಹಿತರಕ್ಷಣಾ ವೇದಿಕೆ ಹಾಗೂ ವಿವಿಧ ಹಿಂದೂ ಸಂಘಟನೆಗಳ ಒಕ್ಕೂಟದ ಸದಸ್ಯರು ಆಗ್ರಹಿಸಿದರು. ಮಸೀದಿ ನಿರ್ಮಾಣದ ಕುರಿತು ನೇಕಾರ ನಗರದ ಬಸವೇಶ್ವರ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿದ ಅವರು, ಸರ್ಕಾರದ ವಿರುದ್ಧ ಘೋಷಣೆ ಕೂಗಿ ಅವರು ಆಕ್ರೋಶ ವ್ಯಕ್ತಪಸಿದರು.

## ಕೇಂದ್ರದ ಸರ್ವಾಧಿಕಾರಿ ಧೋರಣೆಯ ಪ್ರದರ್ಶನ - ಸಿ.ಎಂ.



ಬೆಂಗಳೂರು : ಕೇಂದ್ರ ಸರ್ಕಾರವು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಯೋಜನೆಯ ಹೆಸರು ಮತ್ತು ಸ್ವರೂಪವನ್ನು ಬದಲಾವಣೆ ಮಾಡಿರುವ ಕೇಂದ್ರದ ಈ ನಡೆ ಸರ್ವಾಧಿಕಾರಿ ಧೋರಣೆಯ ಪ್ರದರ್ಶನ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸುಮಾರು 20 ವರ್ಷಗಳ ಹಿಂದೆ ಡಾ. ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದ ಕಾಲದಲ್ಲಿ 'ದುಡಿಮೆಯ ಹಕ್ಕು' ನೀಡುವ ಉದ್ದೇಶದಿಂದ ನರೇಗಾ ಯೋಜನೆಯನ್ನು ಜಾರಿಗೆ ತರಲಾಗಿತ್ತು. ಈ ಕಾಯಿದೆಯನ್ನು ಈಗ 'ವಿಬಿ ರಾಮ್ ಜೀ' ಕಾಯಿದೆ ಎಂದು ಬದಲಾಯಿಸಲಾಗಿದೆ.

## ತಿರುಪ್ಪರನ್‌ಕುಂದ್ರಂನಲ್ಲಿ ದೀಪ ಬೆಳಗಲು ಹಿಂದೂಗಳಿಗೆ ಅನುಮತಿ



ಚೆನ್ನೈ : ತಮಿಳುನಾಡಿನ ತಿರುಪ್ಪರನ್‌ಕುಂದ್ರಂ ಬೆಟ್ಟಗಳ ಮೇಲೆ ದರ್ಗಾದ ಬಳಿ ದೀಪ ಬೆಳಗಿಸುವ ವಿಚಾರ ಎರಡು ಧರ್ಮಗಳ ನಡುವೆ ವಿವಾದವನ್ನು ಹುಟ್ಟುಹಾಕಿತ್ತು. ಆದರೆ ಮದ್ರಾಸ್ ಹೈಕೋರ್ಟ್ ಹಿಂದೂಗಳಿಗೆ ದೀಪ ಬೆಳಗಲು ಅನುಮತಿ ನೀಡಿದ್ದು ಇದು ಎಡ ಪಂಥೀಯರು ಹಾಗೂ ತಮಿಳುನಾಡು ಸರ್ಕಾರಕ್ಕೆ ಪೆಟ್ಟು ಕೊಟ್ಟಂತಾಗಿದೆ. ತಮಿಳುನಾಡು ಸರ್ಕಾರ ಮತ್ತು ಜಿಲ್ಲಾಡಳಿತದ ವಾದಗಳನ್ನು ಹೈಕೋರ್ಟ್ ತನ್ನ ತೀರ್ಪಿನಲ್ಲಿ ತಿರಸ್ಕರಿಸಿದೆ. ದೀಪಂ ವಕ್ಫ್ ಮಂಡಳಿ ಮತ್ತು ದರ್ಗಾದ ಆಸ್ತಿ ಎಂಬ ಹೇಳಿಕೆಯನ್ನು ನ್ಯಾಯಾಲಯ ತಿರಸ್ಕರಿಸಿದೆ.

## ರಾಮ್‌ಜೆಟ್ ಶಕ್ತ ಆರ್ಟಿಲರಿ ಶೆಲ್‌ಗಳ ಬಲ ಪಡೆದ ಸೇನೆ !




ನವದೆಹಲಿ : ಭಾರತೀಯ ಸೇನೆಯ 155 ಎಂಎಂ ಗನ್‌ಗಳಿಗೆ ರಾಮ್‌ಜೆಟ್ ಶಕ್ತ ಆರ್ಟಿಲರಿ ಶೆಲ್‌ಗಳನ್ನು ನಿಯೋಜಿಸಿದೆ. ಈ ಬಲ ಪಡೆದ ವಿಶ್ವದ ಮೊದಲ ಸಶಸ್ತ್ರ ಸೇನೆ ಭಾರತದ್ದಾಗಿದೆ. ಡಿಆರ್‌ಡಿಒ ಮತ್ತು ಐಐಟಿ ಮದ್ರಾಸ್ ಜಂಟಿಯಾಗಿ ಮತ್ತು ಸ್ವಂತವಾಗಿ ಈ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಿವೆ. ಭೂಸೇನೆಯ ಬತ್ತಳಿಕೆಯಲ್ಲಿ ಇರುವ ಪ್ರಮುಖ ಶಸ್ತ್ರಾಸ್ತ್ರಗಳಲ್ಲಿ ಆರ್ಟಿಲರಿ ಶೆಲ್‌ಗಳು ಇವೆ. ಈ ಶೆಲ್‌ಗಳಿಗೆ ರಾಮ್‌ಜೆಟ್ ಎಂಜಿನ್ ಅಳವಡಿಸಿರುವುದು ಗೇಮ್ ಚೇಂಜರ್ ಎನಿಸಿದೆ. ರಾಮ್‌ಜೆಟ್ ಎಂಬುದು ಒಳನುಗ್ಗುವ ಗಾಳಿ ಬಳಸಿಕೊಂಡು ಕೆಲಸ ಮಾಡುವ ಎಂಜಿನ್ ಆಗಿದೆ. ತಿರುಗುವ ಕಂಪ್ರೆಸ್ಸರ್‌ಗಳು ಮತ್ತು ಟರ್ಬೈನ್‌ಗಳು ಬೇಕಾಗುವುದಿಲ್ಲ.

## ಯುದ್ಧನೀತಿ ಎದುರಿಸಲು ಭಾರತೀಯ ಸೇನೆಗೆ 'ಭೈರವ' ಸೇರ್ಪಡೆ



ನವದೆಹಲಿ: ಬದಲಾಗುತ್ತಿರುವ ಆಧುನಿಕ ಯುದ್ಧದ ಸವಾಲುಗಳನ್ನು ಪರಿಣಾಮಕಾರಿ ಎದುರಿಸಲು, ಚೀನಾ, ಪಾಕಿಸ್ತಾನದ ಕುಟಿಲ ಯುದ್ಧ ನೀತಿಗಳನ್ನು ಸಮರ್ಥವಾಗಿ ಎದುರಿಸಲು ಭಾರತೀಯ ಸೇನೆಗೆ ಇದೀಗ 'ಭೈರವ' ಪಡೆಯನ್ನು ಸಿದ್ಧಪಡಿಸಿದೆ. 1ಲಕ್ಷ ಯೋಧರನ್ನೊಳಗೊಂಡು ರಚಿಸಲಾಗಿರುವ ಹೊಸ ವಿಶೇಷ ಪಡೆ ಶತ್ರುಗಳ ಮೇಲೆ ತ್ವರಿತ ದಾಳಿ ಹಾಗೂ ಕ್ಲಿಷ್ಟಕರ ಕಾರ್ಯಾಚರಣೆ ವೇಳೆ ಸೇನೆಗೆ ಬೆನ್ನೆಲುಬಾಗಿ ನಿಲ್ಲಲಿದೆ. ಪದಾತಿದಳದಿಂದ ಆಯ್ಕೆ ಮಾಡಲಾದ ಯೋಧರಿಗೆ 5 ತಿಂಗಳ ಕಠಿಣ ತರಬೇತಿ ಬಳಿಕ ವಿಶೇಷ ಪಡೆ ರಚಿಸಲಾಗಿದೆ.

## ಟ್ರಂಪ್ ವಿಶ್ವದ ಜನರನ್ನು ಹೆದರಿಸಲು ನೋಡ್ತಿದ್ದಾನೆ : ಖರ್ಗೆ



ನವದೆಹಲಿ: ವೆನಿಜುವೆಲಾ ರಾಜಧಾನಿ ಮೇಲೆ ದಾಳಿ ಮಾಡಿ, ಅಲ್ಲಿನ ಅಧ್ಯಕ್ಷನನ್ನು ಹೊತ್ತೊಯ್ದ ಘಟನೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವೆನಿಜುವೆಲಾದ ಘಟನೆ ಜಗತ್ತಿಗೆ ಒಳ್ಳೆಯದಲ್ಲ. ಅಮೆರಿಕಾ ಅಧ್ಯಕ್ಷ ಟ್ರಂಪ್ ವಿಶ್ವದ ಜನರನ್ನು ಹೆದರಿಸಲು ನೋಡ್ತಿದ್ದಾನೆ. ಆದರೆ ಜಗತ್ತು ಅವರ ಮುಂದೆ ಮಂಡಿಯೂರಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ರಾಜ್ಯ ವಿಸ್ತರಿಸಲು ಬಯಸುವವರು ಹೆಚ್ಚು ಕಾಲ ಉಳಿಯಲ್ಲ. ಹಿಟ್ಲರ್, ಮುಸಲೋನಿ ಅಂಥವರೇ ಪ್ರಯತ್ನ ಮಾಡಿ ಕಣ್ಮರೆಯಾಗಿ ಹೋಗಿದ್ದಾರೆ. ಕೆಲವರು ತಮ್ಮ ದುಷ್ಟ ವಿಚಾರಗಳಿಂದ ವಿಶ್ವದ ಶಾಂತಿ ಹಾಳು ಮಾಡಬಾರದು ಎಂದ

## ಮಹಾರಾಷ್ಟ್ರದಲ್ಲಿ ಬಿಜೆಪಿ ಮತ್ತು ಶಿವಸೇನೆ ಮೈತ್ರಿಕೂಟದ ಸುನಾಮಿ



ಮುಂಬೈ : ಮಹಾರಾಷ್ಟ್ರ ರಾಜಕೀಯದಲ್ಲಿ ಬಿಜೆಪಿ ಮತ್ತು ಶಿವಸೇನೆ (ಮಹಾಯುತಿ) ಮೈತ್ರಿಕೂಟ ಸುನಾಮಿ ಎಬ್ಬಿಸಿದೆ. ಮುನ್ಸಿಪಲ್ ಕಾರ್ಪೊರೇಷನ್ ಚುನಾವಣೆಯ ಮತದಾನದ ದಿನಾಂಕ ಹತ್ತಿರವಿರುವಾಗಲೇ, ಒಂದೇ ಒಂದು ಮತ ಚಲಾವಣೆಯಾಗುವ ಮುನ್ನವೇ ಮೈತ್ರಿಕೂಟವು ಬರೋಬ್ಬರಿ 66 ಸ್ಥಾನಗಳನ್ನು ತನ್ನದಾಗಿಸಿಕೊಂಡಿದೆ. ಇದು ಮುಂಬರುವ ಪೂರ್ಣ ಪ್ರಮಾಣದ ಫಲಿತಾಂಶದ ದಿಕ್ಸೂಚಿ ಎಂದು ವಿಶ್ಲೇಷಿಸಲಾಗುತ್ತಿದೆ.

## ಬಾಂಗ್ಲಾದೊಂದಿಗೆ ಗಂಗಾ ನೀರಿನ ಹಂಚಿಕೆಯ ಒಪ್ಪಂದದ ಕೊನೆಯ ವರ್ಷ!



ನವದೆಹಲಿ : ಶೇಖ್ ಹಸೀನಾ ಪದಚ್ಯುತಿ, ಷರೀಫ್ ಒಸ್ಮಾನ್ ಹಾದಿ ಹತ್ಯೆ ನಂತರದಲ್ಲಿ ಬಾಂಗ್ಲಾದೇಶದಲ್ಲಿ ಉಂಟಾಗಿರುವ ಹಿಂಸಾಚಾರ, ಭಾರತ ವಿರೋಧಿ ಧೋರಣೆಯ ನಂತರದಲ್ಲಿ ಭಾರತ ಮತ್ತು ಬಾಂಗ್ಲಾದೇಶ ನಡುವಿನ ರಾಜತಾಂತ್ರಿಕ ಸಂಬಂಧ ಹದಗೆಟ್ಟಿದೆ. ಇದೇ ಸಂದರ್ಭದಲ್ಲಿ ಭಾರತ ಮತ್ತು ಬಾಂಗ್ಲಾದೇಶದಲ್ಲಿ ಹರಿದು ಬಂಗಾಳಕೊಲ್ಲಿ ಸೇರುವ ಗಂಗಾ ನದಿ ನೀರಿನ ಹಂಚಿಕೆಯ ಒಪ್ಪಂದ ಮುಗಿಯಲು ಒಂದೇ ವರ್ಷ ಬಾಕಿ ಇದೆ. ಭಾರತ ಮತ್ತು ಬಾಂಗ್ಲಾದೇಶ ನಡುವೆ ಗಂಗಾ ನದಿ ನೀರು ಹಂಚಿಕೆ ಸಂಬಂಧಿಸಿದಂತೆ 1996ರಲ್ಲಿ ನಡೆದ ಒಪ್ಪಂದವನ್ನು ದ್ವಿಪಕ್ಷೀಯ ರಾಜತಾಂತ್ರಿಕ ವಿಜಯ ಎಂದೇ ಬಣ್ಣಿಸಲಾಗಿತ್ತು.
















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021